# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1338 |
| ಸದಸ್ಯರ ಹೆಸರು | : | ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21.12.2018 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಕೊಡಗು ಜಿಲ್ಲೆಯ ಮಡಿಕೇರಿ ತಾಲ್ಲೂಕಿನ ಮುಕ್ಕೋಡ್ಲು-ಅವಂಡಿ ಗ್ರಾಮದ ನಾಪಂಡ ಕಾಡು ಬಳಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣವಾಗದೆ ಇರುವುದರಿಂದ ಆ ಭಾಗದ ಜನರಿಗೆ ತೀವ್ರ ತೊಂದರೆ ಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ | ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಮಡಿಕೇರಿ ತಾಲ್ಲೂಕಿನ ಮುಕ್ಕೋಡ್ಲು-ಅವಂಡಿ ಗ್ರಾಮದ ನಾಪಂಡ ಕಾಡು ಬಳಿ ನದಿಗೆ ಅಡ್ಡಲಾಗಿ ನಿರ್ಮಾಣದ ಸೇತುವೆಯು 2014-15ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 5054-03-101-0-02-132(ಯೋಜನೆ) ಜಿಲ್ಲಾ ಮುಖ್ಯ ರಸ್ತೆ ಸೇತುವೆಗಳು, ಅಡಿಯಲ್ಲಿ ರೂ.30.00 ಲಕ್ಷಗಳಿಗೆ ಸೇರ್ಪಡೆ ಯಾಗಿತ್ತು (2015-16ನೇ ಸಾಲಿನ ಲೆಕ್ಕ ಶೀರ್ಷಿಕೆ 5054 ರಸ್ತೆ ಮತ್ತು ಸೇತುವೆ ಮುಂದುವರೆದ ಕಾಮಗಾರಿಗಳ "ಅಪೆಂಡಿಕ್ಸ್-ಇ" ಸೇರಿರುತ್ತದೆ). ಆದರೆ, ಸದರಿ ಸೇತುವೆ ನಿರ್ಮಿಸಲು ರೂ.150.00 ಲಕ್ಷಗಳ ಅವಶ್ಯಕತೆ ಇದ್ದ ಕಾರಣ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ. ಈ ರಸ್ತೆಯು "ಹಳ್ಳಿ ರಸ್ತೆಯಾಗಿದ್ದು, ಸೇತುವೆ ನಿರ್ಮಾಣವನ್ನು ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ (ಕೆಆರ್‌ಡಿಸಿಎಲ್) ಅಥವಾ ನಬಾರ್ಡ್ ಯೋಜನೆಯಡಿ ಅನುದಾನ ಲಭ್ಯತೆ ಆಧರಿಸಿ ಕೈಗಳ್ಳಲು ಪರಿಶೀಲಿಸಲಾಗುವುದು. |
| ಇ | ಯಾವ ಕಾಲಮಿತಿಯೊಳಗೆ ಸದರಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕ್ಕೊಂಡು ಪೂರ್ಣಗೊಳಿಸ ಲಾಗುವುದು? | ಅನ್ವಯಿಸುವುದಿಲ್ಲ. |

ಸಂಖ್ಯೆ: ಲೋಇ 184 ಸಿಬಿಆರ್ 2018

(ಹೆಚ್.ಡಿ. ರೇವಣ್ಣ)
ಲೋಕೋಪಯೋಗಿ ಸಚಿವರು